## ತಾಂತ್ರಿಕ ಶಿಕ್ಷಣ ನಿರ್ದೇಶಕರು, ಕರ್ನಾಟಕ, ಬೆಂಗಳೂರು ಇವರ ಕಚೇರಿ ನಡವಳಿಗಳು

ವಿಷಯ: ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿರುವ ಈ ಕೆಳಕಂಡ ಖಾಸಗಿ ಅನುದಾನಿತ ಸಂಸ್ಥೆಗಳ ಸಿಬ್ಬಂದಿ ವರ್ಗದವರಿಗೆ 'ಸ್ಟೇಟ್ ಬ್ಯಾಂಕ್ ಆಫ್ ಇಂಡಿಯ' ಮೂಲಕ ನೇರವಾಗಿ ಆಗಸ್ಟ್ 2019 ರ ಮಾಹೆಯ ಸರ್ಕಾರದ ಪಾಲಿನ ಸಹಾಯಾನುದಾನವನ್ನು ಬಿಡುಗಡೆ ಮಾಡುವ ಬಗ್ಗೆ.

ಉಲ್ಲೇಖ:
1) ಸರ್ಕಾರಿ ಆದೇಶ ಸಂಖ್ಯೆ: ಇಡಿ/184/ಟಿಪಿಇ/ 2009, ದಿ: 27.07.2009
2) ಸರ್ಕಾರಿ ಆದೇಶ ಸಂಖ್ಯೆ: ಇಡಿ/184/ಟಿಪಿಇ/ 2009, ದಿ: 02.03.2010
3) ಸರ್ಕಾರಿ ಆದೇಶ ಸಂಖ್ಯೆ: ಇಡಿ/184/ಟಿಪಿಇ/ 2009, ದಿ: 14-05-2010

**ಪ್ರಸ್ತಾವನೆ:-**

ಉಲ್ಲೇಖ(1)ರ ಸರ್ಕಾರದ ಆದೇಶದಲ್ಲಿ ಸರ್ಕಾರವು ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿರುವ ಖಾಸಗಿ ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳು ಸಿಬ್ಬಂದಿಗಳಿಗೆ ಸರ್ಕಾರದಿಂದ ಬಿಡುಗಡೆ ಮಾಡುವ ಶೇ.85 ರಷ್ಟು ಸಹಾಯಾನುದಾನವನ್ನು ಪ್ರತೀ ತಿಂಗಳು ರಾಷ್ಟ್ರೀಕೃತ ಬ್ಯಾಂಕ್‌ಗೆ ಜಮೆ ಮಾಡುವ ಮೂಲಕ ಸಿಬ್ಬಂದಿ ವರ್ಗದವರುಗಳಿಗೆ (ಬೋಧಕ ಮತ್ತು ಬೋಧಕೇತರ) ವಿತರಿಸಲು ಸರ್ಕಾರವು ಅನುಮತಿಸಿರುತ್ತದೆ. ಹಾಗೂ ಈ ಸಂಬಂಧ ಮುಂದಿನ ಅಗತ್ಯ ಕ್ರಮವನ್ನು ತಾಂತ್ರಿಕ ಶಿಕ್ಷಣ ನಿರ್ದೇಶಕರು ಕೈಗೊಳ್ಳಲು ಆದೇಶಿಸಿರುತ್ತದೆ.

ಉಲ್ಲೇಖ (2) ಮತ್ತು (3) ರ ಆದೇಶಗಳನ್ವಯ, ಇಲಾಖೆಯು ತನ್ನ ಅಧೀನಕ್ಕೆ ಒಳಪಟ್ಟಿರುವ ಎಲ್ಲಾ ಅನುದಾನಿತ ಸಂಸ್ಥೆಗಳಿಗೆ, 'ಸ್ಟೇಟ್ ಬ್ಯಾಂಕ್ ಆಫ್ ಮೈಸೂರು' ಶಾಖೆಗಳಲ್ಲಿ ಸಿಬ್ಬಂದಿ ವರ್ಗದವರ ಹಾಗೂ ಪ್ರಾಂಶುಪಾಲರ ಹೆಸರಿನಲ್ಲಿ ಪ್ರತ್ಯೇಕ ಉಳಿತಾಯ ಖಾತೆಗಳನ್ನು ತೆರೆಯುವಂತೆ ಸೂಚನೆಯನ್ನು ನೀಡಿದ್ದು, ಅದರಂತೆ, ಈ ಕೆಳಕಂಡ ಅನುದಾನಿತ ಸಂಸ್ಥೆಗಳು ಸಿಬ್ಬಂದಿ ವರ್ಗದವರ ಹಾಗೂ ಪ್ರಾಂಶುಪಾಲರ ಹೆಸರಿನಲ್ಲಿ ಪ್ರತ್ಯೇಕ ಖಾತೆಗಳನ್ನು ತೆರೆದಿದ್ದು ಆಗಸ್ಟ್ 2019 ರ ಮಾಹೆಯ ಸಹಾಯಾನುದಾನದ ಬಿಲ್ಲುಗಳನ್ನು ಪಾವತಿಗಾಗಿ ಈ ಕಚೇರಿಗೆ ಸಲ್ಲಿಸಿರುತ್ತವೆ.

ಸಂಸ್ಥೆಗಳು ಸಲ್ಲಿಸಿರುವ ಆಗಸ್ಟ್ 2019 ರ ಸಹಾಯಾನುದಾನ ಬಿಲ್ಲುಗಳನ್ನು ಪರಿಶೀಲಿಸಲಾಗಿದೆ. ಕೆಳಕಂಡ ಎಲ್ಲಾ ಸಂಸ್ಥೆಯ ಕ್ಲೈಮ್‌ಗಳನ್ನು ಇಲಾಖೆಯ ಪೂರ್ಣ ಲೆಕ್ಕ ತಪಾಸಣೆಯ ನಿಬಂಧನೆಗೊಳಪಡಿಸಿ, ಈ ಕೆಳಕಂಡ ಪಟ್ಟಿಯ ಕಾಲಂ(6) ರಲ್ಲಿ ಕಾಣಿಸಿರುವ ಮೊತ್ತ ರೂ.**42555428/-**(ರೂಪಾಯಿ ನಾಲ್ಕು ಕೋಟಿ ಇಪ್ಪತ್ತೈದು ಲಕ್ಷದ ಐವತ್ತೈದು ಸಾವಿರದ ನಾಲ್ಕು ನೂರಾ ಇಪ್ಪತ್ತೆಂಟು ಮಾತ್ರ)ಗಳನ್ನು ನೇರವಾಗಿ ಸಿಬ್ಬಂದಿವರ್ಗದವರಿಗೆ ವಿತರಿಸುವ ಸಲುವಾಗಿ; ಕಾಲಂ(5) ರಲ್ಲಿ ಕಾಣಿಸಿರುವ ಮೊತ್ತ ರೂ.**48982611/-**(ರೂಪಾಯಿ ನಾಲ್ಕು ಕೋಟಿ ಎಂಬತ್ತೊಂಬತ್ತು ಲಕ್ಷದ ಎಂಬತ್ತೆರಡು ಸಾವಿರದ ಆರು ನೂರಾ ಹನ್ನೊಂದು ಮಾತ್ರ)ಗಳನ್ನು ಬಿಲ್ಲಿನಲ್ಲಿ ಕಡಿತಗೊಳಿಸಿರುವ ಮೊತ್ತವನ್ನು ಸಂಬಂಧಪಟ್ಟ ಖಾತೆಗಳಿಗೆ ವಿತರಿಸಲು ಅನುಕೂಲವಾಗುವಂತೆ ಪ್ರಿನ್ಸಿಪಾಲರ ಖಾತೆಗೆ ಜಮ ಮಾಡುವುದಕ್ಕಾಗಿ; ಒಟ್ಟಾರೆ ಕಾಲಂ(4) ರಲ್ಲಿ ಕಾಣಿಸಿರುವ ಒಟ್ಟು ರೂ.**91538039/-**(ರೂಪಾಯಿ ಒಂಬತ್ತು ಕೋಟಿ ಹದಿನೈದು ಲಕ್ಷದ ಮುವತ್ತೆಂಟು ಸಾವಿರದ ಮುವತ್ತೊಂಬತ್ತು ಮಾತ್ರ)ಗಳನ್ನು ಆಗಸ್ಟ್ 2019 ರ ಮಾಹೆಯ ಸಹಾಯಾನುದಾನವನ್ನು ವಿತರಿಸುವ ಸಲುವಾಗಿ ಬಿಡುಗಡೆಗೊಳಿಸಲು ತೀರ್ಮಾನಿಸಲಾಗಿದೆ. ಆದುದರಿಂದ, ಈ ಕೆಳಕಂಡ ಆದೇಶ.

## ಆದೇಶ

**ಸಂಖ್ಯೆ: ಡಿಟಿಇ 27 ಜಿಆರ್‌ಟಿ(2) 2019 ಬೆಂಗಳೂರು, ದಿ:4-9-19**

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಆಗಸ್ಟ್ 2019 ರ ಮಾಹೆಯ ವೇತನ ಕಾಲಂ(6) ರಲ್ಲಿ ಕಾಣಿಸಿರುವ ಮೊತ್ತ ರೂ.**42555428/-**(ರೂಪಾಯಿ ನಾಲ್ಕು ಕೋಟಿ ಇಪ್ಪತ್ತೈದು ಲಕ್ಷದ ಐವತ್ತೈದು ಸಾವಿರದ ನಾಲ್ಕು ನೂರಾ ಇಪ್ಪತ್ತೆಂಟು ಮಾತ್ರ)ಗಳನ್ನು ಈ ಕೆಳಕಂಡ ಖಾಸಗಿ ಅನುದಾನಿತ ಸಂಸ್ಥೆಗಳ ಬೋಧಕ/ಬೋಧಕೇತರ ಸಿಬ್ಬಂದಿ ವರ್ಗದವರುಗಳ ಉಳಿತಾಯಖಾತೆಗಳಿಗೆ ನೇರವಾಗಿ ಜಮೆ ಮಾಡುವ ಸಂಬಂಧವಾಗಿ; ಕಡಿತಗಳನ್ನು ಸಂಬಂಧಿಸಿದ ಕಡಿತಗಳ ಖಾತೆಗಳಿಗೆ ವಿತರಿಸುವುದಕ್ಕಾಗಿ, ಸಂಬಂಧಪಟ್ಟ ಪ್ರಿನ್ಸಿಪಾಲರ ಖಾತೆಗೆ ಜಮೆ ಮಾಡಲು ಹಾಗೂ ಕಾಲಂ(5)ರಲ್ಲಿ ಕಾಣಿಸಿರುವ ಮೊತ್ತ ರೂ.**48982611/-** (ರೂಪಾಯಿ ನಾಲ್ಕು ಕೋಟಿ ಎಂಬತ್ತೊಂಬತ್ತು ಲಕ್ಷದ ಎಂಬತ್ತೆರಡು ಸಾವಿರದ ಆರು ನೂರಾ ಹನ್ನೊಂದು ಮಾತ್ರ)ಗಳು ಸೇರಿ ಒಟ್ಟಾರೆ ಕಾಲಂ (4) ರಲ್ಲಿ ಕಾಣಿಸಿರುವ ವಾಸ್ತವಿಕ ಸಹಾಯನುದಾನದ ಸರ್ಕಾರದ ಪಾಲಿನ ಮೊತ್ತ ರೂ.**91538039/-**(ರೂಪಾಯಿ ಒಂಬತ್ತು ಕೋಟಿ ಹದಿನೈದು ಲಕ್ಷದ ಮುವತ್ತೆಂಟು ಸಾವಿರದ ಮುವತ್ತೊಂಬತ್ತು ಮಾತ್ರ)ಗಳನ್ನು ಈ ಮೂಲಕ ಬಿಡುಗಡೆ ಮಾಡಲಾಗಿದೆ ಹಾಗೂ ಈ ಮೊತ್ತವನ್ನು ಸಿ.ಟಿ.ಎಸ್.8 ರಲ್ಲಿ 'ಡ್ರಾ' ಮಾಡಿ ವಿತರಿಸಲು ಆದೇಶಿಸಲಾಗಿದೆ.

## ಅನುಬಂಧ

| ಕ್ರ.ಸಂ | ಸಂಸ್ಥೆ ಸಂಕೇತ ಸಂಖ್ಯೆ | ಸಂಸ್ಥೆಯ ಹೆಸರು | ಆಗಸ್ಟ್ 2019 ಮಾಹೆಯ ಸರ್ಕಾರದ ಪಾಲಿನ 85% ಮೊತ್ತ (ರೂ.) | ಪ್ರಿನ್ಸಿಪಾಲರ ಖಾತೆಗೆ ಜಮೆಯಾಗ ಬೇಕಾದ ಮೊತ್ತ (ರೂ.) | ನೌಕರರ ಖಾತೆಗೆ ಜಮೆಯಾಗಬೇಕಾದ ಒಟ್ಟು ಮೊತ್ತ (ರೂ.) |
|---|---|---|---|---|---|
| 1 | 2 | 3 | 4 | 5 | 6 |
| 1 | ಇ202 | ಬಿವಿಬಿ ಇಂಜಿನಿಯರಿಂಗ್ ಕಾಲೇಜು, ಹುಬ್ಬಳಿ. | 7354352 | 2135601 | 5218751 |
| 2 | ಇ203 | ಪಿಇಎಸ್ ಇಂಜಿನಿಯರಿಂಗ್ ಕಾಲೇಜು, ಮಂಡ್ಯ | 11065975 | 3795174 | 7270801 |
| 3 | ಇ204 | ಮಲೆನಾಡು ಇಂಜಿನಿಯರಿಂಗ್ ಕಾಲೇಜು, ಹಾಸನ | 10226812 | 3291683 | 6935129 |
| 4 | ಇ205 | ಪಿಡಿಎ ಇಂಜಿನಿಯರಿಂಗ್ ಕಾಲೇಜು, ಕಲಬುರ್ಗಿ | 11784225 | 4259070 | 7525155 |
| 5 | ಇ207 | ಡಾ: ಅಂಬೇಡ್ಕರ್ ತಾಂತ್ರಿಕ ಮಹಾವಿದ್ಯಾಲಯ, ಬೆಂಗಳೂರು | 17535830 | 16927594 | 608236 |
| 6 | ಇ208 | ಬಸವೇಶ್ವರ ಇಂಜಿನಿಯರಿಂಗ್ ಕಾಲೇಜ್, ಬಾಗಲ್‌ಕೋಟೆ | 9793759 | 3074263 | 6719496 |
| 7 | ಇ209 | ಬಿಎಂಎಸ್ ಇಂಜಿನಿಯರಿಂಗ್ ಕಾಲೇಜು, ಬೆಂಗಳೂರು | 12014691 | 10699208 | 1315483 |
| 8 | ಇ210 | ಬಿಎಂಎಸ್ (ಸಂಜೆ) ಇಂಜಿನಿಯರಿಂಗ್ ಕಾಲೇಜು, ಬೆಂಗಳೂರು | 2107533 | 2021738 | 85795 |
| 9 | ಇ211 | ನ್ಯಾಷನಲ್ ಇನ್ಸ್‌ಟಿಟ್ಯೂಟ್ ಆಫ್ ಇಂಜಿನಿಯರಿಂಗ್, ಮೈಸೂರು. | 9654862 | 2778280 | 6876582 |
| | | **ಒಟ್ಟು ಮೊತ್ತ ರೂ.** | **91538039** | **48982611** | **42555428** |

ಷರತ್ತು ಮತ್ತು ನಿಬಂಧನೆಗಳು:-

1)ಇಂಜಿನಿಯರಿಂಗ್ ಕಾಲೇಜುಗಳಿಗೆ ಸಂಬಂಧಪಟ್ಟಂತೆ ಸಹಾಯಾನುದಾನವನ್ನು ಪ್ರಿನ್ಸಿಪಾಲರುಗಳು ಸಲ್ಲಿಸಿರುವ ಬಿಲ್ಲಿನ ಆಧಾರದ ಹಾಗೂ ವಾಸ್ತವಿಕ ಸಹಾಯಾನುದಾನದ ಸರ್ಕಾರದ ಪಾಲಿನ ಶೇ.85ರಷ್ಟು ವೇತನವನ್ನು ಪರಿಗಣಿಸಲಾಗಿದೆ. ಈ ಸಹಾಯಾನುದಾನ ಬಿಡುಗಡೆಯು ಇಲಾಖೆಯ ಲೆಕ್ಕ ತಪಾಸಣೆಗೆ ಒಳಪಟ್ಟಿರುತ್ತದೆ.

2)ಆಡಳಿತ ಮಂಡಳಿಯ ಪಾಲಿನ ಶೇ.15 ರ ಮೊತ್ತವನ್ನು ಸಿಬ್ಬಂದಿಗಳ ಖಾತೆಗಳಿಗೆ ಪಾವತಿಸತಕ್ಕದ್ದು.

3)ಯಾವೊಬ್ಬ ನೌಕರನಿಗೆ ಹೆಚ್ಚಿನ ಅನುದಾನ ಪಾವತಿಯಾಗಿದ್ದು ಕಂಡು ಬಂದಲ್ಲಿ ಅಂತಹ ನೌಕರನಿಂದ ನೀಡಲಾಗಿರುವ ಹೆಚ್ಚುವರಿ ಮೊತ್ತವನ್ನು ನೇರವಾಗಿ ವಸೂಲಿ ಮಾಡಲಾಗುವುದು.

4)2018-19 ನೇ ಸಾಲಿನಲ್ಲಿ ಇಲಾಖೆಯಿಂದ ಬಿಡುಗಡೆಯಾಗಿರುವ ಅನುದಾನದ ಬಗ್ಗೆ 'ಬಳಕೆ ಪ್ರಮಾಣಪತ್ರ' ಹಾಗೂ 'ಸಿಎ' ದೃಢೀಕೃತ ಲೆಕ್ಕಪರಿಶೋಧನಾ ವರದಿಯನ್ನು ಕ.ಆ.ಸಂಹಿತೆ ಅನುಚ್ಛೇದ 161ರ ಅನ್ವಯ ಇಲಾಖೆಗೆ ಸಲ್ಲಿಸತಕ್ಕದ್ದು.

5)ಈಗ ಬಿಡುಗಡೆ ಮಾಡಿರುವ ಅನುದಾನ ಮೊತ್ತದ ಖರ್ಚನ್ನು 2019-20 ನೇ ಸಾಲಿನ ಕೆಳಕಂಡ ಲೆಕ್ಕ ಶೀರ್ಷಿಕೆಯಲ್ಲಿ ಭರಿಸತಕ್ಕದ್ದು. 2203-ತಾಂತ್ರಿಕ ಶಿಕ್ಷಣ-00-104-ಸರ್ಕಾರೇತರ ತಾಂತ್ರಿಕ ಕಾಲೇಜುಗಳು, ಹಾಗೂ ಸಂಸ್ಥೆಗಳಿಗೆ ಸಹಾಯಾನುದಾನ-0-01-ಸರ್ಕಾರೇತರ ತಾಂತ್ರಿಕ ಶಾಲೆಗಳು-01-ಸಹಾಯಾನುದಾನ(2203-00-104-0-01-101).

ನಿರ್ದೇಶಕರು.

ಇವರಿಗೆ ಸೂಕ್ತ ಕ್ರಮಕ್ಕಾಗಿ:

1) ಮೇಲ್ಕಂಡ ಅನುಬಂಧದಲ್ಲಿಯ ಪ್ರಾಚಾರ್ಯರುಗಳಿಗೆ.
2) ನಿರ್ದೇಶನಾಲಯದ ಬಿಎಲ್ಎಸ್[3] ವಿಭಾಗಕ್ಕೆ.
3) ನಿರ್ದೇಶನಾಲಯದ ನಗದು ಶಾಖೆ.

ಪ್ರತಿ ಮಾಹಿತಿಗಾಗಿ:

1] ಮಹಾಲೇಖಪಾಲರು(ಎ&ಇ), ಕರ್ನಾಟಕ, ಬೆಂಗಳೂರು.
2] ಸ್ಪೆಷಲ್ ಸೆಲ್, ಮಹಾಲೇಖಪಾಲರವರ ಕಚೇರಿ, ಬೆಂಗಳೂರು.
3] ಖಜಾನಾಧಿಕಾರಿಗಳು, ರಾಜ್ಯ ಹುಜೂರು ಖಜಾನೆ, ಬೆಂಗಳೂರು, ಇವರ ಮಾಹಿತಿಗಾಗಿ
4] ಲೆಕ್ಕಾಧಿಕಾರಿಗಳು [ಬಿಲ್ಸ್].
5] ನಿರ್ದೇಶನಾಲಯದ ಐಎನ್ಎಸ್ (1), (2), (4) ಮತ್ತು ಆರ್ಇಸಿ(2) ಉಪಶಾಖೆಗಳಿಗೆ.
6] ಹೆಚ್ಚುವರಿ ಪ್ರತಿ [7] ಕಚೇರಿ ಪ್ರತಿ